# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕೋಡಾಲು ಮತ್ತು ಇತರೆ 28 ಜನವಸತಿಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಪರಿಷ್ಕೃತ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:-**
1. ಸರ್ಕಾರದ ಆದೇಶ ಸಂ:ಗ್ರಾಕುನೀ&ನೈಇ/96ಮುಇಂ/ತಾಂತ್ರಿಕ/2019 ದಿನಾಂಕ:27.09.2019.
2. ದಿನಾಂಕ:15.10.2020ರ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆಯ ನಡವಳಿಗಳು.
3. ಮುಖ್ಯ ಅಭಿಯಂತರರು, ಗ್ರಾ.ಕು.ನೀ&ನೈ ಇಲಾಖೆರವರ ಇ-ಆಫೀಸ್ ಕಡತ ಸಂ:RDWSD-TECHOCN/9/2020.

---

**ಪೀಠಿಕೆ:**

ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕೋಡಾಲು ಮತ್ತು ಇತರೆ 28 ಜನವಸತಿಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಯ ಅಂದಾಜಿಗೆ ಮೇಲೆ(1)ರಲ್ಲಿ ಓದಲಾದ ಆದೇಶದಲ್ಲಿ ರೂ.5775.00ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಮೇಲೆ(2)ರಲ್ಲಿ ಓದಲಾದ ಟೆಂಡರ್ ಅಂಗೀಕರಿಸುವ ಪ್ರಾಧಿಕಾರ ಸಭೆ ತೀರ್ಮಾನದನ್ವಯ ರೂ.7965.00ಲಕ್ಷಗಳಿಗೆ ಟೆಂಡರ್ ಮುಖೇನ ಕಾಮಗಾರಿ ಅನುಷ್ಠಾನಗೊಳಿಸಲು ಅನುಮತಿಸಲಾಗಿದೆ.

ವಿದ್ಯುತ್ ವೆಚ್ಚ, ಪ್ರೈಸ್ ಎಸ್ಕಲೇಶನ್, ಇಂಡಿಗಂಟು ಮೊತ್ತ ಮತ್ತು ಯೋಜನಾ ನಿರ್ವಹಣಾ ಸಮಾಲೋಚನಾ ವೆಚ್ಚ ಹಾಗೂ ಪ್ರಸ್ತುತ 2020-21ನೇ ಸಾಲಿನ SR ದರಗಳ ಹೆಚ್ಚಳದಿಂದ ಈ ಯೋಜನೆಯ ಅಂದಾಜು ಮೊತ್ತದಲ್ಲಿ ಹೆಚ್ಚಳವಾಗಿದ್ದು **ರೂ.7965.00ಲಕ್ಷಗಳಿಗೆ** ಪರಿಷ್ಕೃತವಾಗಿದೆ. ಮೇಲೆ ಓದಲಾದ(2) ರನ್ವಯ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಇವರು ರೂ.49.14ಕೋಟಿ ಅಂದಾಜು ಮೊತ್ತದಲ್ಲಿ ಸದರಿ ಕುಡಿಯುವ ನೀರು ಪೂರೈಸುವ ಯೋಜನೆಯ ಅನುಷ್ಠಾನಕ್ಕೆ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಚಾಲ್ತಿ ಪಾರದರ್ಶಕ ನೀತಿಯನ್ವಯ ನಿಯಮಾನುಸಾರ ಬಳ್ಳಾರಿ ಜಿಲ್ಲಾ ಪಂಚಾಯತ್ ಹಾಗೂ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಪ್ರಕ್ರಿಯೆಯನ್ನು ಅನುಸರಿಸಲು ಅನುವಾಗುವಂತೆ **ಜಲ ಜೀವನ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/40/ಗ್ರಾನೀಸ(4)2021, ಬೆಂಗಳೂರು, ದಿನಾಂಕ:20.02.2021.** 206

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಬಳ್ಳಾರಿ ಜಿಲ್ಲೆಯ ಸಂಡೂರು ತಾಲ್ಲೂಕಿನ ಕೋಡಾಲು ಮತ್ತು ಇತರೆ 28 ಜನವಸತಿಗಳಿಗೆ ಸುರಕ್ಷಿತ ಹಾಗೂ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸುವ ಯೋಜನೆಯನ್ನು **ರೂ.7965.00ಲಕ್ಷ (ಏಳು ಸಾವಿರದ ಒಂಭೈನೂರ ಅರವತ್ತೈದು ಲಕ್ಷ ರೂಪಾಯಿಗಳು ಮಾತ್ರ) ಗಳಿಗೆ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ (O&M)** ಬಾಬ್ತು ಸೇರಿದಂತೆ ಪರಿಷ್ಕೃತ ಅಂದಾಜು ಮೊತ್ತದಲ್ಲಿ ಕಾರ್ಯಗತಗೊಳಿಸುವ ಸಂಬಂಧ **ಜಲ ಜೀವನ ಮಿಷನ್ (JJM)** ಕಾರ್ಯಕ್ರಮದ ಅಡಿಯಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ಹರ್ಷಿಸುತ್ತದೆ.

**2. ಈ ಆಡಳಿತಾತ್ಮಕ ಅನುಮೋದನೆ ಮತ್ತು ಅನುದಾನ ವಿನಿಯೋಗ ಕೆಳಕಂಡ ಷರತ್ತುಗಳಿಗೊಳಪಟ್ಟಿರುತ್ತದೆ:**

(a) ಈ ಅನುಮೋದಿತ ಕುಡಿಯುವ ನೀರಿನ ಯೋಜನೆಯ ವ್ಯಾಪ್ತಿಗೆ ಬರುವ ಗ್ರಾಮ / ಜನವಸತಿಗಳು ಮತ್ತ್ಯಾವುದೇ ಯೋಜನೆಗಳಡಿ ಸೇರ್ಪಡೆಯಾಗಿರಬಾರದು.

b) ಈ ಯೋಜನೆಯ **DBOT** ಟೆಂಡರ್‌ನ್ನು KTPP ಪಾರದರ್ಶಕ ನಿಯಮಗಳನ್ನು ಅನುಸರಿಸಿ ಅದರಂತೆ ಕ್ರಮವಹಿಸತಕ್ಕದ್ದು.

c) ಟೆಂಡರ್ ಅವಾರ್ಡ್ ಮಾಡುವ ಮೊದಲು ಅಗತ್ಯವಿರುವ ಅನುದಾನವನ್ನು ಲಭ್ಯತೆ ಮಾಡಿಕೊಂಡು ಕ್ರಿಯಾ ಯೋಜನೆಯಲ್ಲಿ ಅಳವಡಿಸಿದ ನಂತರ ನಿಯಮಾನುಸಾರ ಮುಂದಿನ ಕ್ರಮವಹಿಸುವುದು.

d) ಈ ಯೋಜನೆಯ ಅನುಷ್ಠಾನ ಮತ್ತು ಅನುದಾನ ವಿನಿಯೋಗದಲ್ಲಿ ಅನುಮೋದಿತ ಟೆಂಡರ್ ಮೊತ್ತ ಮೀರಿ ಹೆಚ್ಚಳವಾಗದಂತೆ ಅನುಷ್ಠಾನ ಅಧಿಕಾರಿಗಳು ನಿಗಾವಹಿಸಿ ಪ್ರಚಲಿತ ನಿಯಮಗಳನುಸಾರ ಅಗತ್ಯವಿರುವ ನಿಬಂಧನೆಗಳನ್ನು ಅಳವಡಿಸಿಕೊಂಡು ಸೂಕ್ತ ರೀತಿಯಲ್ಲಿ ಒಡಂಬಡಿಕೆ– ಕರಾರುಗಳನ್ನು ಮಾಡಿಕೊಳ್ಳತಕ್ಕದ್ದು.

e) ಯಶಸ್ವಿ ಗುತ್ತಿಗೆದಾರರು ಕಾಮಗಾರಿಯನ್ನು ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸಿ ಕಾರ್ಯಗತಗೊಳಿಸಬೇಕು. ತದನಂತರ **5** ವರ್ಷಗಳ ಕಾಲ ಸದರಿ ಯೋಜನೆಯ ಸಂಪೂರ್ಣ ನಿರ್ವಹಣೆ ಹಾಗೂ ಕಾರ್ಯಾಚರಣೆ ಜವಾಬ್ದಾರಿಯನ್ನು ಸದರಿ ಸಂಸ್ಥೆಯೇ ನಿರ್ವಹಿಸತಕ್ಕದ್ದು.

f) ಯೋಜನಾ ವ್ಯಾಪ್ತಿಯ ಜನವಸತಿಗಳಿಗೆ 85 LPCD ನೀರನ್ನು ಒದಗಿಸುವುದು. ಯಾವುದೇ ಕಾರಣಕ್ಕೂ ಅನುಮೋದಿತ ಯೋಜನಾ ಅಂದಾಜು ವೆಚ್ಚದಲ್ಲಿ ಹೆಚ್ಚಳವಾದಲ್ಲಿ ಗುತ್ತಿಗೆದಾರರೇ ಅಂತಹ ಹೆಚ್ಚಳ ಭರಿಸತಕ್ಕದ್ದು.

g) ಗುತ್ತಿಗೆದಾರರು ಸಿದ್ಧಪಡಿಸುವ ಡಿ.ಪಿ.ಆರ್‌ಗೆ ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಹಂತದಲ್ಲಿರುವ **DBOT** ತಾಂತ್ರಿಕ ಸಮಿತಿ, ತಾಂತ್ರಿಕ ಸಿಂಧುತ್ವವನ್ನು ಪರಿಶೀಲಿಸಿ ದೃಢೀಕರಿಸಬೇಕು. ಹೀಗೆ ದೃಢೀಕರಿಸುವಾಗ ವಾಸ್ತವಿಕವಾಗಿ ಅಗತ್ಯವಿರುವ ಪ್ರಮಾಣದ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆಗೆ ಅಗತ್ಯವಿರುವ ಎಲ್ಲಾ ತಾಂತ್ರಿಕ ವಿನ್ಯಾಸಗಳು ಮತ್ತು ಕಾಮಗಾರಿಗಳು ಪೂರಕವಾಗಿರುವುದನ್ನು ದೃಢಪಡಿಸಿಕೊಳ್ಳಬೇಕು.

h) ಈ ಯೋಜನೆಯ ಕಾಮಗಾರಿಯನ್ನು 24 ತಿಂಗಳ ಕಾಲಮಿತಿಯೊಳಗೆ ಅನುಷ್ಠಾನಗೊಳಿಸತಕ್ಕದ್ದು. ಯಾವುದೇ ವಿಳಂಬಕ್ಕೆ ಅವಕಾಶ ನೀಡಬಾರದು. ಯೋಜನೆಯ ಘಟಕದಲ್ಲಿನ ಸಾಮಗ್ರಿಗಳ ಬೆಲೆ ಹೆಚ್ಚಳಕ್ಕೆ ಅವಕಾಶವಿರುವುದಿಲ್ಲ. ಬಲ್ಕ್‌ವಾಟರ್ ಮೀಟರ್‌ಗಳನ್ನು ಎಲ್ಲಾ ಜನವಸತಿಗಳ OHT ಬಳಿ ಅಳವಡಿಸತಕ್ಕದ್ದು.

i) ಈ ಯೋಜನೆಯ ಮುಖ್ಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿದ ನಂತರ, ಅವುಗಳ ಗುಣಮಟ್ಟ ಮತ್ತು ಕಾರ್ಯಕ್ಷಮತೆ ಮತ್ತು **PMC** ವರದಿ ಆಧರಿಸಿ ಅನುಮೋದಿತ **ToR** ಹಾಗೂ ಟೆಂಡರ್ ಕರಾರಿನಂತೆ ನಿಯಮಾನುಸಾರ ಬಿಲ್ ಪಾವತಿಸಲು ಅನುಷ್ಠಾನಾಧಿಕಾರಿಗಳು ಹಾಗೂ ಮುಖ್ಯ ಅಭಿಯಂತರರು, ಗ್ರಾ.ಕು.ನೀ.&ನೈ ಇಲಾಖೆ ಕ್ರಮವಹಿಸಬೇಕು. ಕಾಮಗಾರಿಯ ಕಾಲಕಾಲಿಕ ಪ್ರಗತಿ ಮತ್ತು ಗುಣಮಟ್ಟ ಪರಿಶೀಲಿಸಿ ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ವರದಿ ಮಾಡತಕ್ಕದ್ದು.

j) ಈ ಯೋಜನೆಯ ವಿನ್ಯಾಸದ ಕಾರ್ಯಸಿಂಧುತ್ವ ಪರಿಶೀಲಿಸುವುದು, ಕಾಲಮಿತಿಯೊಳಗೆ ಯೋಜನೆ ಅನುಷ್ಠಾನಗೊಳಿಸುವುದು ಮತ್ತು ಯೋಜನೆಯ ಕಾಮಗಾರಿಗಳ ಗುಣಮಟ್ಟ ಪರಿವೀಕ್ಷಣೆ ಸಲುವಾಗಿ ಅಗತ್ಯವಿರುವ ಯೋಜನಾ ಉಸ್ತುವಾರಿ ಘಟಕವನ್ನು ಟೆಂಡರ್ ಮುಖೇನ ಗೊತ್ತುಪಡಿಸಿ, ಸರ್ಕಾರದ ಅನುಮೋದನೆ ಪಡೆಯಲು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಜರೂರಾಗಿ ಕ್ರಮವಹಿಸತಕ್ಕದ್ದು.

k) ಮೇಲ್ಕಂಡ ಅನುಮೋದಿತ ಮೊತ್ತ **DBOT** ತಾಂತ್ರಿಕ ಸಮಿತಿ ದೃಢೀಕರಿಸುವ ಯೋಜನೆಯ ಮುಖ್ಯ ಕಾಮಗಾರಿಗಳ ವಾಸ್ತವಿಕ ಅಂದಾಜು ಮೊತ್ತದ ನಿಬಂಧನೆಗೊಳಪಟ್ಟಿರುತ್ತದೆ. ಅಂತೆಯೇ, ಅನುಮೋದಿತ ಸಂಸ್ಥೆಯೊಡನೆ **MoU**/ಕರಾರು ಪತ್ರ ಮಾಡಿಕೊಳ್ಳುವ ಮೊದಲು ಗರಿಷ್ಠ ಮಿತವ್ಯಯ ಅಳವಡಿಸಿ, ಸರ್ಕಾರದ ಅನುಮತಿ ಪಡೆದು ಯೋಜನೆಯ ಅನುಷ್ಠಾನ ಕುರಿತು ಮುಖ್ಯ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಮುಂದಿನ ಕ್ರಮವಹಿಸತಕ್ಕದ್ದು.

3. ಈ ಆದೇಶವನ್ನು **ಆರ್ಥಿಕ ಇಲಾಖೆ ಟಿಪ್ಪಣಿ ಸಂ:ಆಇ 409 ವೆಚ್ಚ-6/2020, ದಿನಾಂಕ:11.11.2020**ರ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20/12/2021

ಉಪ ಕಾರ್ಯದರ್ಶಿ (ಆಡಳಿತ)
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ –AG/A&E) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು–I – G&SSA- AUDIT) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು– II – E&RSA-) ಕರ್ನಾಟಕ, ಬೆಂಗಳೂರು.
4. ಅಧ್ಯಕ್ಷರು, ಜಿಲ್ಲಾ ಪಂಚಾಯತ್, **ಬಳ್ಳಾರಿ.**
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಆಯುಕ್ತರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
8. ಮುಖ್ಯ ಅಭಿಯಂತರರು, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.
9. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
10. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, **ಬಳ್ಳಾರಿ.**
11. ಅಧೀಕ್ಷಕ ಅಭಿಯಂತರರು, ಗ್ರಾ.ಕು.ನೀ.&.ನೈ. ವೃತ್ತ ಕಛೇರಿ, **ಕಲಬುರಗಿ.**
12. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
13. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
14. ಮುಖ್ಯ ಲೆಕ್ಕಾಧಿಕಾರಿ, ಗ್ರಾ.ಕು.ನೀ.&.ನೈ. ಇಲಾಖೆ, ಬೆಂಗಳೂರು.
15. ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.&.ನೈ. ವಿಭಾಗ, **ಬಳ್ಳಾರಿ.**
16. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ, (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು) ಬೆಂಗಳೂರು.
17. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ) ಬೆಂಗಳೂರು.
18. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು) ಬೆಂಗಳೂರು.
19. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.